ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 4 ಪ್ರವಾಹ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 10/11/20

# 2384.89 ಕೋಟಿ ರೂ. ನೆರವಿಗೆ ಕೇಂದ್ರಕ್ಕೆ ಪ್ರಸ್ತಾವನೆ

10/11/22

**ಬೆಂಗಳೂರು:** ರಾಜ್ಯದಲ್ಲಿ ಮೂರೂ ಹಂತದ ಪ್ರವಾಹದಿಂದ 24,941.73 ಕೋಟಿ ರೂ. ನಷ್ಟದ ಅಂದಾಜು ಮಾಡಲಾಗಿದ್ದು ಎಸ್‌ಡಿಆರ್‌ಎಫ್ ಮಾರ್ಗಸೂಚಿಯನ್ವಯ 2384.89 ಕೋಟಿ ರೂ. ನೆರವು ಬಿಡುಗಡೆಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಕಂದಾಯ ಸಚಿವ ಆರ್.ಅಶೋಕ್ ಅವರು ಸೋಮವಾರ ಈ ಮಾಹಿತಿ ನೀಡಿದ್ದು ಇದುವರೆಗೂ ಪ್ರವಾಹ ಪರಿಹಾರವಾಗಿ ಎಸ್‌ಡಿಆರ್‌ಎಫ್ ನಿಧಿಯಿಂದ 727.80 ಕೋಟಿ ರೂ. ಬಿಡುಗಡೆಯಾಗಿದೆ ಎಂದು ಹೇಳಿದ್ದಾರೆ.



- ಸದ್ಯದಲ್ಲೇ ಕೇಂದ್ರ ತಂಡ ಆಗಮನ
- ಸಚಿವ ಅಶೋಕ್ ಮಾಹಿತಿ

ಕೇಂದ್ರದಿಂದ ಬಿಡುಗಡೆಯಾಗಿರುವ 727.80 ಕೋಟಿ ರೂ. ಪೈಕಿ ಕೊರೊನಾ ಪರಿಹಾರಕ್ಕೆ 436.62 ಕೋಟಿ ರೂ., ಪ್ರವಾಹ ಪರಿಹಾರಕ್ಕೆ 276.08 ಕೋಟಿ ರೂ., ಅಗ್ನಿ ಮತ್ತು ತುರ್ತು ಸೇವೆಗಳಿಗೆ 20.1 ಕೋಟಿ ರೂ. ಹಾಗೂ ಸಾಮರ್ಥ್ಯ ನಿರ್ವಹಣೆಗೆ 5 ಕೋಟಿ ರೂ. ಬಿಡುಗಡೆಯಾಗಿದೆ ಎಂದು ವಿವರಿಸಿದ್ದಾರೆ.

ಪ್ರವಾಹದಿಂದ ಬೆಳೆಹಾನಿಗೆ 2,56,491 ರೈತರಿಗೆ 203.78 ಕೋಟಿ ರೂ. ಇನ್‌ಪುಟ್ ಸಬ್ಸಿಡಿ ಪಾವತಿಸಲಾಗಿದೆ. ರೈತರ ಬ್ಯಾಂಕ್ ಖಾತೆಗೆ ಮೊತ್ತವನ್ನು ನೇರವಾಗಿ ಜಮೆ ಮಾಡಲಾಗಿದೆ. ಪ್ರಸ್ತುತ ರೈತರ ದಾಖಲೆ ತಂತ್ರಾಂಶದಲ್ಲಿ ದಾಖಲಿಸುವ ಕಾರ್ಯ ಪ್ರಗತಿಯಲ್ಲಿದೆ. ಇದುವರೆಗೂ 2.56,491 ಸಂತ್ರಸ್ತರ ದಾಖಲಾತಿ ತಂತ್ರಾಂಶದಲ್ಲಿ ನಮೂದಿಸಲಾಗಿದೆ ಎಂದೂ ಅವರು ಹೇಳಿದ್ದಾರೆ. ಪ್ರವಾಹದಿಂದ ಇದುವರೆಗೂ 47,851 ಮನೆಗಳು ಹಾನಿಗೊಳಗಾಗಿವೆ. ಸರ್ಕಾರದ ಮಾರ್ಗಸೂಚಿಯನ್ವಯ ಪರಿಹಾರ ವಿತರಿಸಲಾಗಿದೆ ಎಂದಿದ್ದಾರೆ.

ರಾಜ್ಯದ 25 ಜಿಲ್ಲೆಗಳ 180 ತಾಲೂಕುಗಳಲ್ಲಿ ಪ್ರವಾಹದಿಂದ 18.05 ಲಕ್ಷ ಹೆಕ್ಟೇರ್ ತೋಟಗಾರಿಕೆ ಬೆಳೆ ಹಾಗೂ 0.56 ಲಕ್ಷ ಹೆಕ್ಟೇರ್ ಕಾಫಿ ಹಾಗೂ ಇತರ ತೋಟಗಾರಿಕೆ ಬೆಳೆ ಸೇರಿ 21.6 ಲಕ್ಷ ಹೆಕ್ಟೇರ್ ಬೆಳೆ ಹಾನಿಯಾಗಿದೆ .180 ತಾಲೂಕುಗಳನ್ನು ಪ್ರವಾಹ ಪೀಡಿತ ಎಂದು ಘೋಷಿಸಲಾಗಿದೆ. ಪ್ರವಾಹದಿಂದ ತೊಂದರೆಗೊಳಗಾದ 29,560 ನೆರೆ ಸಂತ್ರಸ್ತ ಕುಟುಂಬಗಳಿಗೆ ತುರ್ತು ಪರಿಹಾರಕ್ಕೆ ತಲಾ 10 ಸಾವಿರ ರೂ. ಗಳಂತೆ 29.56 ಕೋಟಿ ರೂ. ಸಂಪೂರ್ಣವಾಗಿ ನೀಡಲಾಗಿದೆ. 136 ಗ್ರಾಮಗಳಿಂದ 43,158 ಜನರನ್ನು ಸ್ಥಳಾಂತರಿಸಲಾಗಿದೆ. 5016 ಜಾನುವಾರು ರಕ್ಷಿಸಲಾಗಿದೆ ಎಂದು ತಿಳಿಸಿದ್ದಾರೆ.

ಅಕ್ಟೋಬರ್‌ನಲ್ಲಿ ಉಂಟಾದ ಭಾರೀ ಪ್ರವಾಹದಿಂದ ಹಾನಿಗೊಳಗಾಗಿರುವ ಪ್ರದೇಶಗಳಿಗೆ ಕೇಂದ್ರ ತಂಡ ಸದ್ಯದಲ್ಲೇ ಭೇಟಿ ನೀಡಲಿದೆ. ಅಧಿಕಾರಿಗಳು ತಂಡಕ್ಕೆ ಸೂಕ್ತ ಮಾಹಿತಿ ನೀಡಲಿದ್ದಾರೆ ಎಂದೂ ಸಚಿವ ಅಶೋಕ್ ಹೇಳಿದ್ದಾರೆ.